All India Radio: Bangalore
Regional Bulletin In Kannada
15.10.2025 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
<> <> <> <>
ಮುಖ್ಯಾಂಶಗಳು:

೧. ಕೌಶಲ್ಯವರ್ಧನೆಯಿಂದ ಪರಿಪೂರ್ಣತೆ ಸಾಧ್ಯ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

೨. ಶಾಸಕರ ಅನುದಾನದಲ್ಲಿ ಸರ್ಕಾರ ತಾರತಮ್ಯ ಮಾಡುತ್ತಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಸಚಿವ ಪ್ರಿಯಾಂಕ್ ಖರ್ಗೆಗೆ ಬೆದರಿಕೆ ಕರೆ ವಿಚಾರ ; ಸರ್ಕಾರ ಗಂಭೀರವಾಗಿ ಪರಿಗಣಿಸಿದೆ - ಗೃಹ ಸಚಿವ ಡಾ. ಜಿ. ಪರಮೇಶ್ವರ್

೪. ಪೆಟ್ರೋಲ್, ಡೀಸಲ್ ಸೆಸ್‌ನಿಂದ ೧ ಕೋಟಿ ೩೦ ಲಕ್ಷ ಅಸಂಘಟಿತ ವಲಯದ ಕಾರ್ಮಿಕರಿಗೆ ಲಾಭ - ಸಚಿವ ಸಂತೋಷ್ ಲಾಡ್

><><><><

ಯುವ ಪದವಿಧರರ ಕೌಶಲ್ಯಾಭಿವೃದ್ಧಿಯನ್ನು ಹೆಚ್ಚಿಸಿ, ಉತ್ತಮ ಕೆಲಸ ಅವರಿಗಾಗಿ ಕಾಯುತ್ತದೆ ಎನ್ನುವುದು ಪ್ರಧಾನಮಂತ್ರಿಗಳ ಕನಸಾಗಿತ್ತು, ಅದು ಪಿಎಂಐಎಸ್ ಯೋಜನೆಯಿಂದ ಸಾಕಾರಗೊಂಡಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಂತಸ ವ್ಯಕ್ತಪಡಿಸಿದರು. ಅವರು ಇಂದು ಹೊಸಪೇಟೆಯಲ್ಲಿ ಆಯೋಜಿಸಲಾಗಿದ್ದ ಪಿಎಂಐಎಸ್ ಇಂಟರ್ನಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದರು. ಪದವಿ ಪಡೆಯುವುದು ಒಂದು ಭಾಗವಾದರೆ ಕೌಶಲ್ಯವನ್ನು ಹೆಚ್ಚಿಸಿಕೊಳ್ಳುವುದು ಇನ್ನೊಂದು ಭಾಗ. ಈ ಎರಡು ಭಾಗಗಳು ಒಂದಾದಾಗ ಮಾತ್ರ ಪರಿಪೂರ್ಣತೆ ಬರುತ್ತದೆ ಎಂದು ಇಂಟರ್ನಿಗಳಿಗೆ ಕಿವಿಮಾತು ಹೇಳಿದರು. ಸಂವಾದ ಕಾರ್ಯಕ್ರಮದಲ್ಲಿ ಹಲವಾರು ಇಂಟರ್ನಿಗಳು ತಮ್ಮ ಅನುಭವವನ್ನು ಹಂಚಿಕೊಂಡರು.

><><><><

ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಬೆದರಿಕೆ ಕರೆಗಳು ಬರುತ್ತಿರುವುದಾಗಿ ಖುದ್ದು ಅವರೇ ತಿಳಿಸಿದ್ದು, ಸರ್ಕಾರಿ ಸ್ಥಳಗಳಲ್ಲಿ ಆರ್.ಎಸ್.ಎಸ್ ಚಟುವಟಿಕೆಗಳನ್ನು ಕೈಗೊಳ್ಳಬಾರದು. ತಮಿಳುನಾಡು ಮಾದರಿಯಲ್ಲಿ ಇಲ್ಲಿಯೂ ನಿರ್ಬಂಧ ಮಾಡಬೇಕು. ಇಂತಹ ಬೆದರಿಕೆಗಳಿಗೆ ಹೆದರುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಮೈಸೂರು ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್‌ಎಸ್‌ಎಸ್ ವಿರುದ್ಧ ತಮಿಳುನಾಡಿನಲ್ಲಿ ಯಾವ ರೀತಿ ನಿರ್ಬಂಧ ಹೇರಲಾಗಿದೆ ಎಂಬ ಬಗ್ಗೆ ಮಾಹಿತಿ ತರಿಸುವಂತೆ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸಲಾಗಿದೆ. ವರದಿ ಬಂದ ನಂತರ ಅದನ್ನು ಪರಿಶೀಲಿಸಲಾಗುವುದು ಎಂದು ತಿಳಿಸಿದ ಅವರು ಪ್ರಿಯಾಂಕ ಖರ್ಗೆಯವರಿಗೆ ರಕ್ಷಣೆ ಒದಗಿಸಲಾಗುವುದು ಎಂದರು. ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯು ತಡವಾಗುತ್ತಿರುವ ಬಗ್ಗೆ ಕುರಿತಂತೆ, ಬೆಂಗಳೂರು ನಗರ ಬಿಟ್ಟರೆ ಬೇರೆಲ್ಲಿಯೂ

ಶೇಕಡಾವಾರು ಪ್ರಮಾಣದಲ್ಲಿ ಕಡಿಮೆಯಾಗಿಲ್ಲ ಎಂದು ಮುಖ್ಯಮಂತ್ರಿಯವರು ಸ್ಪಷ್ಟಪಡಿಸಿದ್ದಾರೆ. ಶಾಸಕರಿಗೆ ಅನುದಾನ ನೀಡುವಲ್ಲಿ ಸರ್ಕಾರ ತಾರತಮ್ಯ ಮಾಡುತ್ತಿಲ್ಲ, ರಾಜ್ಯದ ಸರ್ವತೋಮುಖ ಅಭಿವೃದ್ಧಿಯಾಗಬೇಕಿದ್ದು, ಎಲ್ಲರಿಗೂ ಅನುದಾನ ಒದಗಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

><><><><

ರಾಜ್ಯದಲ್ಲಿ ಸುಮಾರು ೧ ಕೋಟಿ ೩೦ ಲಕ್ಷ ಅಸಂಘಟಿತ ವಲಯದ ಕಾರ್ಮಿಕರು ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ೧ ರೂಪಾಯಿ ಪ್ರಸ್ತಾವಿತ ಸೆಸ್ ಸಂಗ್ರಹದಿಂದ ಪ್ರಯೋಜನ ಪಡೆಯಲಿದ್ದಾರೆ ಎಂದು ಕಾರ್ಮಿಕ ಸಚಿವ ಸಂತೋಷ್ ಎಸ್. ಲಾಡ್ ಹೇಳಿದ್ದಾರೆ. ಇಂದು ಯಾದಗಿರಿಯಲ್ಲಿ ಅಧಿಕಾರಿಗಳ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಸಂಘಟಿತ ವಲಯಗಳಿಗೆ ಹೆಚ್ಚಿನ ಸರ್ಕಾರಿ ಸವಲತ್ತುಗಳನ್ನು ಒದಗಿಸುವ ಗುರಿಯನ್ನು ಇಲಾಖೆ ಹೊಂದಿದೆ ಎಂದು ತಿಳಿಸಿದ್ದಾರೆ. ಈ ಪ್ರಸ್ತಾವನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಳುಹಿಸಲಾಗಿದ್ದು, ಈ ಪ್ರಸ್ತಾವನೆಯನ್ನು ಸಂಪುಟ ಚರ್ಚೆಯಲ್ಲಿ ಮಂಡಿಸಲಾಗುವುದು. ಸಚಿವ ಸಂಪುಟ ಒಪ್ಪಿಗೆ ನೀಡಿದರೆ, ಅಸಂಘಟಿತ ವಲಯದ ಕಾರ್ಮಿಕರಿಗೆ ಪ್ರಯೋಜನಗಳು ಸಿಗುತ್ತವೆ ಎಂದು ಅವರು ಹೇಳಿದರು. ಕಾರ್ಮಿಕ ಇಲಾಖೆಯು ತಮ್ಮ ಆನುವಂಶಿಕ ವೃತ್ತಿಗಳಲ್ಲಿ ಕೆಲಸ ಮಾಡುತ್ತಿರುವ ೧೦೧ ವಿವಿಧ ರೀತಿಯ ಕಾರ್ಮಿಕರ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಲಿದೆ. ಕರ್ತವ್ಯದಲ್ಲಿರುವಾಗ ಮರಣ ಹೊಂದಿದ ಅಥವಾ ಶಾಶ್ವತ ಅಂಗವೈಕಲ್ಯಕ್ಕೆ ಒಳಗಾದ ಕಾರ್ಮಿಕರ ಕುಟುಂಬ ಸದಸ್ಯರಿಗೆ ೧ ಲಕ್ಷ ರೂಪಾಯಿ ಪರಿಹಾರ ಮತ್ತು ಆಸ್ಪತ್ರೆ ವೆಚ್ಚಕ್ಕಾಗಿ ೫೦ ಸಾವಿರ ರೂಪಾಯಿ ನೀಡಲಾಗುವುದು ಎಂದು ಹೇಳಿದ್ದಾರೆ. ಸಾರಿಗೆ ವಲಯದ ಕಾರ್ಮಿಕರಿಗೆ ಅಸಂಘಟಿತ ವಲಯಗಳಿಗಿಂತ ಹೆಚ್ಚಿನ ಪ್ರಯೋಜನಗಳು ಸಿಗುತ್ತವೆ. ಮರಣ ಮತ್ತು ಶಾಶ್ವತ ಅಂಗವೈಕಲ್ಯಕ್ಕೆ ೫ ಲಕ್ಷ ರೂಪಾಯಿ ಪರಿಹಾರವನ್ನು ಕುಟುಂಬ ಸದಸ್ಯರಿಗೆ ನೀಡಲಾಗುವುದು. ಕಾರ್ಮಿಕ ಇಲಾಖೆ ಅಧಿಕಾರಿಗಳು ಅಭಿಯಾನಗಳ ಮೂಲಕ ಕಾರ್ಮಿಕರಿಂದ ಸದಸ್ಯತ್ವವನ್ನು ಸ್ವೀಕರಿಸುತ್ತಿದ್ದಾರೆ ಮತ್ತು ಇಲ್ಲಿಯವರೆಗೆ ೧೦ ಲಕ್ಷ ಕಾರ್ಮಿಕರನ್ನು ನೋಂದಾಯಿಸಲಾಗಿದೆ ಎಂದು ಅವರು ತಿಳಿಸಿದರು.

><><><><

ಮೋದಿ ಸರ್ಕಾರದ ಮಹತ್ವದ ಯೋಜನೆ 'ಪ್ರಧಾನ ಮಂತ್ರಿ ಮುದ್ರಾ ಯೋಜನೆ'. ಈ ಯೋಜನೆಯು ಆರಂಭವಾದಾಗಿನಿಂದ ಇಲ್ಲಿಯವರೆಗೆ ವಿಜಯಪುರ ಜಿಲ್ಲೆಯಲ್ಲಿ ೧ ಲಕ್ಷದ ೭೧ ಸಾವಿರ ೬೪೨ ಜನ ಫಲಾನುಭವಿಗಳು ಯೋಜನೆಯ ಪ್ರಯೋಜನವನ್ನು ಪಡೆದುಕೊಂಡಿದ್ದಾರೆ. ಒಂದು ಸಾವಿರ ೩೬ ಕೋಟಿ ರೂಪಾಯಿ ಆ ಫಲಾನುಭವಿಗಳಿಗೆ ಲಭಿಸಿದೆ ಎಂದು ವಿಜಯಪುರ ಅಗ್ರಣಿ ಬ್ಯಾಂಕ್ ಪ್ರಬಂಧಕ ಸಿದ್ದಯ್ಯ ಹೇಳಿದ್ದಾರೆ. ಈ ಯೋಜನೆಯ ಲಾಭ ಪಡೆದ ವಿಜಯಪುರದ ಫಲಾನುಭವಿ ಸಚಿನ್ ಹೊನಕೇರಿ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ : ಸಚಿನ್ ಹೊನಕೇರಿ (   ಸೆಕೆಂಡ್‌ಗಳು)

><><><><

ನವೆಂಬರ್ ೮ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಚಿಕ್ಕಬಳ್ಳಾಪುರ ಜಿಲ್ಲೆಗೆ ಪ್ರವಾಸ ಕೈಗೊಂಡಿದ್ದು, ಶಿಡ್ಲಘಟ್ಟದ ೨೦೦ ಕೋಟಿ ರೂಪಾಯಿ ವೆಚ್ಚದ ಹೈಟೆಕ್ ರೇಷ್ಮೆ ಮಾರುಕಟ್ಟೆ ಕಾಮಗಾರಿಗೆ ಶಂಕುಸ್ಥಾಪನೆಯೂ ಸೇರಿದಂತೆ ಸುಮಾರು ೧ ಸಾವಿರ ಕೋಟಿ ರೂಪಾಯಿಗೂ ಹೆಚ್ಚು

ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಧ್ವನಿ : ಡಾ. ಎಂ.ಸಿ. ಸುಧಾಕರ್ ( ಸೆಕೆಂಡ್‌ಗಳು)

><><><><

ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಬೆದರಿಕೆ ಕರೆಗಳು ಬಂದಿರುವ ವಿಚಾರವನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ. ಸದಾಶಿವನಗರದ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತಮಾಡಿದ ಅವರು, ಯಾರು ಬೆದರಿಕೆ ಕರೆ ಮಾಡಿದ್ದಾರೆ, ಎಲ್ಲಿಂದ ಬಂದಿದೆ ಎಂಬುದನ್ನು ತನಿಖೆ ಮಾಡಲಾಗುವುದು. ಆರ್‌ಎಸ್‌ಎಸ್ ವಿಚಾರದಲ್ಲಿ ಸಚಿವರು ತಮ್ಮ ಅಭಿಪ್ರಾಯ ಹೇಳಿರಬಹುದು. ಆ ಬಗ್ಗೆ ಸರ್ಕಾರ ತೀರ್ಮಾನ ಮಾಡುತ್ತದೆ. ಎಲ್ಲವನ್ನು ಪರಿಶೀಲನೆ ಮಾಡಲು ಸೂಚಿಸಲಾಗಿದೆ ಎಂದು ತಿಳಿಸಿದರು. ಯಾದಗಿರಿ ಎಎಸ್‌ಐ ಕಿಡ್ನಾಪ್ ಮಾಡಿ ಹಲ್ಲೆ ಮಾಡಿದ್ದಾರೆಂಬ ಮಾಜಿ ಸಚಿವ ರಾಜುಗೌಡ ಆರೋಪದ ಕುರಿತು ಪ್ರತಿಕ್ರಿಯಿಸಿ, ಈ ಬಗ್ಗೆ ವರದಿ ನೀಡುವಂತೆ ಕಾನೂನು ಸುವ್ಯವಸ್ಥೆ ಎಡಿಜಿಪಿ ಅವರಿಗೆ ಸೂಚಿಸಲಾಗಿದೆ ಎಂದು ಅವರು ತಿಳಿಸಿದರು.

><><><><

ರಾಜ್ಯದಲ್ಲಿ ಭತ್ತದ ತಳಿಗಳ ಆಧುನಿಕ ಸಂಶೋಧನೆ ಮತ್ತು ಸಂವರ್ಧನೆಗೆ ನೆರವಾಗುವ ಕುರಿತು ಫಿಲಿಫೈನ್ಸ್‌ನ ಅಂತಾರಾಷ್ಟ್ರೀಯ ಭತ್ತ ಸಂಶೋಧನಾ ಕೇಂದ್ರದೊಂದಿಗೆ ಮಂಡ್ಯ ಕೃಷಿ ವಿಶ್ವವಿದ್ಯಾಲಯ ಮಹತ್ವದ ಒಡಂಬಡಿಕೆ ಮಾಡಿಕೊಂಡಿದೆ. ಫಿಲಿಪೈನ್ಸ್‌ನ ಮನಿಲಾದಲ್ಲಿರುವ ಅಂತಾರಾಷ್ಟ್ರೀಯ ಭತ್ತ ಸಂಶೋಧನಾ ಕೇಂದ್ರಕ್ಕೆ ಉನ್ನತ ಮಟ್ಟದ ನಿಯೋಗದೊಂದಿಗೆ ತೆರಳಿರುವ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಒಪ್ಪಂದಕ್ಕೆ ಸಹಿ ಮಾಡಿದರು. ರಾಜ್ಯದಲ್ಲಿ ನೆರೆ ಹಾವಳಿ, ಬರ ಪರಿಸ್ಥಿತಿಗಳು ಕರಾವಳಿ, ಮಲೆನಾಡು ಬಯಲು ಸೀಮೆ ವಿಭಿನ್ನ ಭೌಗೋಳಿಕ ಪರಿಸರಕ್ಕೆ ಹೊಂದಾಣಿಕೆಯಾಗುವ ವಿವಿಧ ಜೈವಿಕ, ಅಜೈವಿಕ ಒತ್ತಡಗಳಿಗೆ ನಿರೋಧಕತೆ ಜೊತೆಗೆ ಪೌಷ್ಟಿಕಾಂಶ ಉಳ್ಳ, ಅಧಿಕ ಇಳುವರಿ ತರುವ ಬೇಸಾಯ ಕ್ರಮಗಳು ಮತ್ತು ಭತ್ತದ ತಳಿಗಳ ಸಂಶೋಧನೆಗೆ ಈ ಒಡಂಬಡಿಕೆ ನೆರವಾಗಲಿದೆ. ಇದೇ ವೇಳೆ ಕೃಷಿ ಸಚಿವ ಎನ್ ಚಲುವರಾಯಸ್ವಾಮಿ ಅವರು ಅಧಿಕಾರಿಗಳ ತಂಡದೊಂದಿಗೆ ಅಂತಾರಾಷ್ಟ್ರೀಯ ಭತ್ತದ ಸಂಶೋಧನಾ ಕೇಂದ್ರದ ಜೀನ್ ಬ್ಯಾಂಕ್ ಒಳಗೊಂಡಂತೆ ವಿವಿಧ ಪ್ರಯೋಗಾಲಯಗಳು ಮತ್ತು ತಾಕುಗಳಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಂಡರು.

><><><><

ಬೀದರ್ ಜಿಲ್ಲೆಯಲ್ಲಿ ಸೆಪ್ಟೆಂಬರ್‌ನಲ್ಲಿ ಸುರಿದ ಧಾರಾಕಾರ ಮಳೆಯಿಂದ ಆಗಿರುವ ಬೆಳೆ ಹಾನಿಗೆ ಮುಖ್ಯಮಂತ್ರಿಗಳು ಘೋಷಿಸಿರುವ ಪ್ರತಿ ಹೆಕ್ಟೇರ್ ಗೆ ಹೆಚ್ಚುವರಿ ೮ ಸಾವಿರದ ೫೦೦ ರೂಪಾಯಿ ಪರಿಹಾರ ಸೇರಿದಂತೆ ಒಟ್ಟಾರೆ ೩೦೦ ಕೋಟಿ ರೂಪಾಯಿ ಬೆಳೆ ಹಾನಿ ಪರಿಹಾರವನ್ನು ಇದೇ ೩೦ರೊಳಗೆ ಪಾವತಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ. ಬೀದರ್ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ನಡೆದ ಕೆ.ಡಿ.ಪಿ. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,

ಮಳೆ ಹಾನಿ ಪ್ರದೇಶದ ತಹಶೀಲ್ದಾರರು ಪರಿಹಾರದ ಪೋರ್ಟಲ್‌ನಲ್ಲಿ ಹಾನಿಯ ಪ್ರಮಾಣವನ್ನು ಕಡ್ಡಾಯವಾಗಿ ದಾಖಲಿಸಿ, ಪರಿಹಾರ ನೀಡಿಕೆಗೆ ನಾಳೆಯೊಳಗೆ ತುರ್ತು ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು. ಎನ್.ಡಿ.ಆರ್.ಎಫ್. ಮತ್ತು ಎಸ್.ಡಿ.ಆರ್.ಎಫ್. ನಿಯಮದಂತೆ ೧೭೦ ಕೋಟಿ ರೂಪಾಯಿ ಪರಿಹಾರವನ್ನು ಈಗಾಗಲೇ ಪಾವತಿಸಲಾಗುತ್ತಿದೆ. ಇದೇ ೩೦ರೊಳಗೆ ೩೦೦ ಕೋಟಿ ರೂಪಾಯಿ ಪರಿಹಾರ ಮೊತ್ತ ಪಾವತಿಸಲಾಗುವುದು ಎಂದು ಸ್ಪಷ್ಟಪಡಿಸಿದರು. ಸಭೆಯಲ್ಲಿ ಅಕಾಲಿಕ ಮಳೆಯಿಂದ ಉಂಟಾಗಿರುವ ಜೀವಹಾನಿ, ಬೆಳೆಹಾನಿ, ಮನೆ ಹಾನಿ, ಜಾನುವಾರು ಹಾನಿಗೆ ದೀಪಾವಳಿಯೊಳಗೆ ಪರಿಹಾರ ನೀಡುವುದಾಗಿ ಪ್ರಕಟಿಸಲಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಮಾನವೀಯ ನೆಲೆಗಟ್ಟಿನಲ್ಲಿ ಹಗಲಿರುಳು ಶ್ರಮಿಸಿ, ವಿಕೋಪದಿಂದ ಸಂಕಷ್ಟಕ್ಕೆ ಸಿಲುಕಿರುವ ಕುಟುಂಬದವರ ನೆರವಿಗೆ ಧಾವಿಸಬೇಕು ಎಂದು ಆದೇಶ ನೀಡಿದರು. ಮಳೆ ಹಾನಿಗೆ ಸಂಬಂಧಿಸಿದಂತೆ ಪರಿಹಾರ ಪೋರ್ಟಲ್ ನಲ್ಲಿ ದಾಖಲಿಸುವ ಪ್ರತಿಯೊಂದು ಮಾಹಿತಿಯನ್ನೂ ಗ್ರಾಮಪಂಚಾಯ್ತಿ, ತಹಶೀಲ್ದಾರರ ಕಚೇರಿ ಮತ್ತು ರೈತ ಸಂಪರ್ಕ ಕೇಂದ್ರಗಳಲ್ಲಿ ಬಹಿರಂಗವಾಗಿ ಪ್ರಕಟಿಸುವಂತೆ ತಿಳಿಸಿದ್ದಾರೆ.

><><><><